ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು 560001.**

ಸಂಖ್ಯೆ:ಸಿ7(8) ಆರ್.ಟಿ.ಇ/ಶು.ಮ/ತಂ.ಬಿ/2020-21 ದಿನಾಂಕ:20.01.2022

## ::ಸುತ್ತೋಲೆ::

ವಿಷಯ: 2020-21ನೇ ಸಾಲಿನ ಆರ್.ಟಿ.ಇ ಶುಲ್ಕ ಮರುಪಾವತಿಗೆ ತಂತ್ರಾಂಶದ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ

ಉಲ್ಲೇಖ: 1) ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:02.01.2021, 01.02.2021, 03.03.2021, 03.05.2021, 05.07.2021, 09.09.2021 ಮತ್ತು 02.11.2021

@@@@@

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್12(1)(ಸಿ)ರಡಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ 2020-21ನೇ ಸಾಲಿನ ಶುಲ್ಕ ಮರುಪಾವತಿಗೆ ಬೇಡಿಕೆ ಸಲ್ಲಿಸಲು ಆನ್‌ಲೈನ್ ತಂತ್ರಾಂಶವನ್ನು ದಿನಾಂಕ:30.11.2021ರವರೆಗೆ ಬಿಡುಗಡೆ ಮಾಡಲಾಗಿತ್ತು.

ಇನ್ನೂ ಅನೇಕ ಶಾಲೆಗಳು ಬೇಡಿಕೆ ಸಲ್ಲಿಸದಿರುವ ಹಿನ್ನೆಲೆಯಲ್ಲಿ ಬೇಡಿಕೆ ಸಲ್ಲಿಕೆಗೆ ಅಂತಿಮವಾಗಿ ದಿನಾಂಕವನ್ನು 17.02.2022ರವರೆಗೆ ವಿಸ್ತರಿಸಿದೆ. ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಕುರಿತು ವೈಯಕ್ತಿಕ ಗಮನಹರಿಸಿ ವ್ಯಾಪಕ ಪ್ರಚಾರ ನೀಡಿ, ಖಾಸಗಿ ಅನುದಾನ ರಹಿತ ಶಾಲೆಗಳು ಶುಲ್ಕ ಮರುಪಾವತಿ ಬೇಡಿಕೆ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.

[ಮಾನ್ಯ ಆಯುಕ್ತರ ಅನುಮೋದನೆ ಮೇರೆಗೆ]

20/01/22

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಇವರಿಗೆ,

1. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
6. ಹಿರಿಯ ಸಹಾಯಕ ನಿರ್ದೇಶಕರು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಕರ್ನಾಟಕ, ಇವರಿಗೆ ಸೂಕ್ತ ಕ್ರಮಕ್ಕಾಗಿ.
7. ಸಂಬಂಧಿಸಿದ ಖಾಸಗಿ ಅನುದಾನರಹಿತ ಶಾಲೆಗಳ ಮುಖ್ಯಸ್ಥರು/ಕಾರ್ಯದರ್ಶಿಗಳಿಗೆ ಅಗತ್ಯ ಕ್ರಮಕ್ಕಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ.
8. ಕಛೇರಿ ಪ್ರತಿ.